# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1139** |
| 2 | ಸದಸ್ಯರ ಹೆಸರು | : | ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ) |
| 3 | ಉತ್ತರಿಸುವ ದಿನಾಂಕ | : | 23.02.2024 |
| 4 | ಉತ್ತರಿಸುವ ಸಚಿವರು | : | ಮಾನ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬಯಲುಸೀಮೆ ಮಂಡಳಿಯನ್ನು ಕಳೆದ 2 ವರ್ಷಗಳಿಂದ ಅನುದಾನ ಕಾಮಗಾರಿ ಹಂಚಿಕೆಯಲ್ಲಿ ಅವ್ಯವಹಾರದ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ; (ವಿವರವಾದ ಮಾಹಿತಿ ನೀಡುವುದು) | -ಬಂದಿದೆ-<br><br>ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯಲ್ಲಿ 2022-23ನೇ ಸಾಲಿನಲ್ಲಿ ಮಂಡಳಿಯ ಕಾರ್ಯದರ್ಶಿ ಹಾಗೂ ಅಧ್ಯಕ್ಷರು ಮಂಡಳಿ ಹಂತದಲ್ಲಿ ನಿರ್ಣಯ ಕೈಗೊಂಡು ಹೆಚ್ಚುವರಿ ಕಾಮಗಾರಿಗಳಿಗೆ ಅನುಮೋದನೆ ನೀಡಿ ಅವ್ಯವಹಾರ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದ ನಂತರ ನಿರ್ದೇಶಕರು, ಪ್ರದೇಶಾಭಿವೃದ್ಧಿ ಮಂಡಳಿರವರ ತಂಡವು ಪರಿಶೀಲನೆ ಕೈಗೊಂಡು ಹೆಚ್ಚುವರಿ ಮಂಜೂರಾತಿ ನೀಡಿದ್ದ ರೂ.362.53 ಕೋಟಿ ಕಾಮಗಾರಿಗಳಲ್ಲಿ ರೂ.224.05 ಕೋಟಿಗಳ 2374 ಕಾಮಗಾರಿಗಳನ್ನು ರದ್ದುಪಡಿಸಲಾಗಿದ್ದು, ಅನುದಾನ ಬಿಡುಗಡೆ ಮಾಡಿರುವ ಹಾಗೂ ಪ್ರಾರಂಭವಾಗಿರುವ ಕಾಮಗಾರಿಗಳನ್ನು ಮುಂದುವರೆದ ಕಾಮಗಾರಿಗಳೆಂದು ಪರಿಗಣಿಸಿ ಹೆಚ್ಚುವರಿಯಾಗಿ ರೂ.150.00 ಕೋಟಿಗಳನ್ನು ಮಂಜೂರು ಮಾಡಲು ಮಾನ್ಯ ಮುಖ್ಯ ಮಂತ್ರಿಯವರನ್ನು ಕೋರಲಾಗಿರುತ್ತದೆ.<br><br>ಹೆಚ್ಚುವರಿ ಮಂಜೂರಾತಿ ನೀಡಲು ಕಾರಣ ಕರ್ತರಾದ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ಕಾರ್ಯದರ್ಶಿ, ಉಪ ಕಾರ್ಯದರ್ಶಿ ಮತ್ತು ವಿಷಯ ನಿರ್ವಾಹಕರನ್ನು ಅಮಾನತ್ತು ಮಾಡಲಾಗಿದೆ ಮತ್ತು ಸದರಿ ಅಧಿಕಾರಿ / ನೌಕರರು ಬೇರೆ ಬೇರೆ ಇಲಾಖೆಯಿಂದ ನಿಯೋಜನೆ ಮೇಲೆ ಮಂಡಳಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಸದರಿಯವರನ್ನು ಅವರ ಮಾತೃ ಇಲಾಖೆಗಳಿಗೆ ಬಿಡುಗಡೆ ಮಾಡಲಾಗಿದೆ. ಸದರಿ ಅಧಿಕಾರಿ / ನೌಕರರ ವಿರುದ್ಧ ಇಲಾಖಾ ವಿಚಾರಣೆ ಪ್ರಕ್ರಿಯೆಯು ಕೈಗೊಳ್ಳಲಾಗಿದೆ. |
| (ಆ) | ಈ ಮಂಡಳಿಯಲ್ಲಿ ಗಂಭೀರ ಸ್ವರೂಪದ ಅವ್ಯವಹಾರ ಜರುಗಿದ್ದು, ಸರ್ಕಾರವು ಇದನ್ನು ಸಿ.ಐ.ಡಿ. ತನಿಖೆಗೆ ವಹಿಸುತ್ತದೆಯೇ; | ನಿರ್ದೇಶಕರು, ಪ್ರದೇಶಾಭಿವೃದ್ಧಿ ಮಂಡಳಿರವರ ತಂಡವು ವಿವರವಾಗಿ ಪರಿಶೀಲನೆ ನಡೆಸಿ ವರದಿ ನೀಡಿರುವುದರಿಂದ ಸಿಐಡಿ ತನಿಖೆಗೆ ವಹಿಸುವ ಅಗತ್ಯತೆ ಇರುವುದಿಲ್ಲ. |

| | | |
|---|---|---|
| (ಇ) | ಕಳೆದ 2 ವರ್ಷಗಳಿಂದ ಎಂ.ಎಲ್.ಎ ಮತ್ತು ಎಂ.ಎಲ್.ಸಿ. ಗಳ KLLADS ನಲ್ಲಿ Unspent ಆಗಿ ಉಳಿದ ಎಷ್ಟು ಹಣವನ್ನು ಮರಳಿ ಪಡೆಯಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು) | ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ ಮಾರ್ಗಸೂಚಿ ಕಂಡಿಕೆ-4.1 ರನ್ವಯ ಮಾನ್ಯ ಶಾಸಕರು ಪ್ರಸ್ತಾಪಿಸಿರುವ/ ಅನುಮೋದನೆ ನೀಡಿದ ಕಾಮಗಾರಿಗಳನ್ನು ಎರಡು ವರ್ಷಗಳ ಅವಧಿಯಲ್ಲಿ ಅನುಷ್ಠಾನಗೊಳಿಸಲು ಅವಕಾಶ ಕಲ್ಪಿಸಿರುವುದರಿಂದ ಯಾವುದೇ UNSPENT ಅನುದಾನ ವಾಪಸ್ಸು ಪಡೆದಿರುವುದಿಲ್ಲ. |
| (ಈ) | ಈ ಹಣವನ್ನು ಯಾವ ಕಾಮಗಾರಿಗಳಿಗೆ ಉಪಯೋಗಿಸಲಾಗಿದೆ; (ವಿವರವಾದ ಮಾಹಿತಿ ನೀಡುವುದು) | ಎರಡು ವರ್ಷಗಳ ಅವಧಿಯಲ್ಲಿ ಯಾವುದೇ ಹಣವನ್ನು ವಾಪಸ್ಸು ಪಡೆಯದೇ ಇರುವುದರಿಂದ ಸದರಿ ಅನುದಾನವನ್ನು ಕಾಮಗಾರಿಗಳಿಗೆ ಉಪಯೋಗಿಸುವ ಸಂದರ್ಭ/ಪ್ರಶ್ನೆ ಉದ್ಭವಿಸುವುದಿಲ್ಲ. |
| (ಉ) | ಹಾಲಿ ಮರಳಿ ಪಡೆದಿರುವ ಹಣವನ್ನು ಉಳಿದಿರುವ ಹಣ ಎಷ್ಟು? | -ಅನ್ವಯಿಸುವುದಿಲ್ಲ- |

ಸಂಖ್ಯೆ: ಪಿಡಿಎಸ್ 20 ಪಿಟಿಪಿ 2024

**(ಡಿ. ಸುಧಾಕರ್)**
**ಯೋಜನೆ, ಕಾರ್ಯಕ್ರಮ ಸಂಯೋಜನೆ**
**ಮತ್ತು ಸಾಂಖ್ಯಿಕ ಸಚಿವರು**